RNU AIR DHARWAD

SEPTEMBER 23, 2025

**AKASHAVANI - DHARWAD**

**PRADESH SAMACHARA (KANNADA) 07.05 A.M.**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ಮುಖ್ಯಾಂಶಗಳು:**

**ರಾಜ್ಯದಲ್ಲಿ ನವೋದ್ಯಮ ಹಾಗೂ ಸ್ಥಳೀಯ ಆರ್ಥಿಕತೆ ವೇಗ ವರ್ಧನೆಗೆ, 'ಲೀಪ್' ಕಾರ್ಯಕ್ರಮ**

**ಹಬ್ಬದ ಋತುವಿನಲ್ಲಿ 'ಜಿ.ಎಸ್.ಟಿ ಉಳಿತಾಯ ಉತ್ಸವ' ಆಚರಿಸುವಂತೆ ಪ್ರಧಾನಮಂತ್ರಿ ನರೇಂದ್ರ ಮೋದಿ ಕರೆ**

**ರಾಜ್ಯ ಸರ್ಕಾರದಿಂದ, 60 ಕ್ರೀಡಾಪಟುಗಳ ಒಲಿಂಪಿಕ್ಸ್ ತರಬೇತಿಗೆ, ತಲಾ 10 ಲಕ್ಷ ರೂಪಾಯಿ ಸಹಾಯಧನ**

**ಇಂದು, ರಾಷ್ಟ್ರೀಯ ಆಯುರ್ವೇದ ದಿನ.**

<><><>

**ಈಗ ವಾರ್ತೆಗಳ ವಿವರ**

<><><>

**ಬೆಂಗಳೂರು ಹೊರತುಪಡಿಸಿ, ರಾಜ್ಯದೆಲ್ಲೆಡೆ ನವೋದ್ಯಮಗಳಿಗೆ ಒತ್ತು ನೀಡಿ, ನಾವಿನ್ಯತೆ ಹಾಗೂ ಆರ್ಥಿಕತೆಯ ವೇಗ ವರ್ಧನೆ ದೃಷ್ಟಿಯಿಂದ, ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ, ಲೀಪ್– ಸ್ಥಳೀಯ ಆರ್ಥಿಕ ವೇಗವರ್ಧಕ ಕಾರ್ಯಕ್ರಮವನ್ನು ರೂಪಿಸಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಖಾತೆ ಸಚಿವ ಪ್ರಿಯಾಂಕ ಖರ್ಗೆ ತಿಳಿಸಿದ್ದಾರೆ. ವಿಧಾನಸೌಧದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಲೀಪ್ ಕಾರ್ಯಕ್ರಮದ ಮೂಲಕ, 5 ಲಕ್ಷ ಉದ್ಯೋಗಗಳನ್ನು ಸೃಷ್ಟಿಸಿ, ದೃಢವಾದ ನವೋದ್ಯಮ ಪರಿಸರ ವ್ಯವಸ್ಥೆ ನಿರ್ಮಿಸಲು ಸಾಧ್ಯವಾಗಲಿದೆ ಎಂದರು.**

<><><>

**ಸರಕು ಮತ್ತು ಸೇವಾ ತೆರಿಗೆ, ಕೇಂದ್ರ ಮಂಡಳಿ, 56 ನೇ ಸಭೆ ಶಿಫಾರಸಿನಂತೆ, ದೇಶಾದ್ಯಂತ ಜಾರಿಗೆ ಬಂದಿದ್ದು, ವಿವಿಧೆಡೆ ಸಂಭ್ರಮಾಚರಣೆ ಜರುಗಿತು. ನವರಾತ್ರಿ ಹಬ್ಬದ ಋತುವಿನಲ್ಲಿ 'ಜಿ.ಎಸ್.ಟಿ ಉಳಿತಾಯ ಉತ್ಸವ' ಆಚರಿಸೋಣ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ದೇಶಬಾಂಧವರನ್ನು ಸಂಬೋಧಿಸಿ ಪತ್ರ ಬರೆದಿದ್ದಾರೆ. ಹೊಸ ಸುಧಾರಣೆಗಳು ಪ್ರತಿ ಭಾರತೀಯ ಕುಟುಂಬಕ್ಕೂ ಹೆಚ್ಚಿನ ಸುಖ, ಸಮೃದ್ಧಿಯನ್ನು ತರಲಿ ಎಂದು ಆಶಿಸಿದ್ದಾರೆ. ದಾವಣಗೆರೆಯಲ್ಲಿ ಆಯೋಜಿಸಲಾಗಿದ್ದ ಜಿ.ಎಸ್ಟಿ ಸಂಭ್ರಮಾಚರಣೆ ಕಾರ್ಯಕ್ರಮದಲ್ಲಿ, ಮಾತನಾಡಿದ ಬಿಜೆಪಿ ಜಿಲ್ಲಾಧ್ಯಕ್ಷ ರಾಜಶೇಖರ್ ನಾಗಪ್ಪ 'ಜಿ.ಎಸ್ಟಿ ದರ ಇಳಿಕೆಯಿಂದ ದೇಶದ ಜನರಿಗೆ ವಾರ್ಷಿಕ 2 ಲಕ್ಷ ಕೋಟಿ ರೂಪಾಯಿ ಉಳಿತಾಯವಾಗಲಿದೆ ಎಂದರು. ಹುಬ್ಬಳ್ಳಿಯಲ್ಲಿ ಮಾತನಾಡಿದ, ಸಂಸದ ಬಿ.ವೈ ರಾಘವೇಂದ್ರ, ಜಿ.ಎಸ್ಟಿ ದರ ಪರಿಷ್ಕರಣೆ ಮೂಲಕ, ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರವು, ಜನರ ಖರೀದಿ ಶಕ್ತಿಯನ್ನು ಹೆಚ್ಚಿಸಿದೆ ಎಂದರು.**

<><><>

ರಾಜ್ಯ ಸರ್ಕಾರವು ಕ್ರೀಡಾಕ್ಷೇತ್ರಕ್ಕೆ ಉತ್ತೇಜನ ನೀಡುತ್ತಿದ್ದು, ರಾಜ್ಯದ 60 ಪ್ರತಿಭಾವಂತ ಕ್ರೀಡಾಪಟುಗಳ, ಒಲಿಂಪಿಕ್ಸ್ ತರಬೇತಿಗೆ ತಲಾ 10 ಲಕ್ಷ ರೂಪಾಯಿ, ವಾರ್ಷಿಕ ಸಹಾಯಧನ ನೀಡಿ, ತರಬೇತಿ ವ್ಯವಸ್ಥೆ ಕಲ್ಪಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಮೈಸೂರು, ಚಾಮುಂಡಿ ಕ್ರೀಡಾಂಗಣದಲ್ಲಿ ಆಯೋಜಿತ, ರಾಜ್ಯ ದಸರಾ ಸಿ.ಎಂ ಕಪ್ ಕ್ರೀಡಾಕೂಟ ಉದ್ಘಾಟಿಸಿ ಅವರು ಮಾತನಾಡಿದರು. ಮುಂದಿನ ಒಲಿಂಪಿಕ್ಸ್ ಕ್ರೀಡಾಕೂಟದಲ್ಲಿ, ಪದಕ ವಿಜೇತ ರಾಜ್ಯದ ಕ್ರೀಡಾಪಟುಗಳಿಗೆ, ಸರ್ಕಾರವು 6 ಕೋಟಿ ರೂಪಾಯಿ ನಗದು ಬಹುಮಾನ ನೀಡಲಿದ್ದು, ಸರ್ಕಾರಿ ಉದ್ಯೋಗಗಳಲ್ಲಿ ಶೇಕಡಾ 2 ರಷ್ಟು ಮೀಸಲಾತಿ ಒದಗಿಸಲಾಗುವುದು ಎಂದರು.

<><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಜನ್ಮದಿನವಾದ ಸೆಪ್ಟೆಂಬರ್ 17 ರಿಂದ, ಅಕ್ಟೋಬರ್ 2 ಗಾಂಧಿ ಜಯಂತಿ ವರೆಗೆ ಸೇವಾ ಪರ್ವ ಅಭಿಯಾನವು ನಾಡಿನಾದ್ಯಂತ ಆಯೋಜಿತವಾಗಿದೆ. ಸ್ವಚ್ಛತಾ ಹಿ ಸೇವಾ ಅಭಿಯಾನದಡಿ, ನಗರ ನೈರ್ಮಲ್ಯಕ್ಕೆ ಹೆಚ್ಚಿನ ಒತ್ತು ನೀಡಿ, ಪರಿಸರ ಕಾಳಜಿ ಮೂಡಿಸಲಾಗುತ್ತಿದೆ. ಅರಣ್ಯ ಇಲಾಖೆ ವತಿಯಿಂದ, ಧಾರವಾಡ ಆಕಾಶವಾಣಿ ಕೇಂದ್ರದ ಆವರಣದಲ್ಲಿ, ಹುಬ್ಬಳ್ಳಿಯ ಮೈಕ್ರೊ ಫಿನಿಶ್ ವಾಲ್ವ್ಸ್ ಪ್ರೈವೆಟ್ ಲಿಮಿಟೆಡ್ ಇದರ ಸಾಮಾಜಿಕ ಹೊಣೆಗಾರಿಕೆ ನಿಧಿ ಅಡಿ, ವಸುಂಧರಾ ಫೌಂಡೇಶನ್ ನೇತೃತ್ವದಲ್ಲಿ ಮಿಯಾವಾಕಿ ಅರಣ್ಯ ಉದ್ಘಾಟನೆಗೆ ಸಿದ್ಧಗೊಂಡಿದೆ. ಈ ಕುರಿತು, ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ಆಕಾಶವಾಣಿ ಧಾರವಾಡ ಕೇಂದ್ರದ, ಕಾರ್ಯಕ್ರಮ ನಿರ್ವಾಹಕರಾದ ಮಂಜುಳಾ ಪುರಾಣಿಕ್

<><><>

ಧ್ವನಿ: ಮಂಜುಳಾ ಪುರಾಣಿಕ್ 75 ಸೆಕೆಂದುಗಳು

<><><>

<><><>

ಈಗ ಪ್ರಕಟಣೆ,
ನಂತರ ಪ್ರದೇಶ ಸಮಾಚಾರ ಮುಂದುವರೆಯುವುದು..
(43 ಸೆಕೆಂದುಗಳು)

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

ಆಕಾಶವಾಣಿ ಸುದ್ದಿಗಳಿಗಾಗಿ, ನಮ್ಮ **x** ಖಾತೆ **@airnews_Kannada** ಹಾಗೂ

ನಮ್ಮ ಫೇಸ್ಬುಕ್ ಖಾತೆ **Akashvani RNU Bengaluru-Dharwad** ಅನುಸರಿಸಿ.

<><><>

<><><>

ಧ್ಯೇಯ ಸಂಗೀತ 10 ಸೆಕೆಂದುಗಳು

<><><>

ಸೇವೆ ಮತ್ತು ಸುಶಾಸನ ಧ್ಯೇಯದೊಂದಿಗೆ, ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ, ಸೇವಾ ಪರ್ವದ ಮೂಲಕ, ಪರಿವರ್ತನೆ ಹಾಗೂ ಪ್ರಗತಿಯನ್ನು, ಸಾರ್ವಜನಿಕ ಸೇವೆ ಮತ್ತು ಉತ್ತಮ ಆಡಳಿತದಿಂದ ಸಾಧಿಸಲು, ಶ್ರಮಿಸುತ್ತಿದೆ. ಅಸಂಘಟಿತ ವಲಯವು ದೇಶದ ಜಿಡಿಪಿ– ಒಟ್ಟು ದೇಶಿಯ ಉತ್ಪನ್ನಕ್ಕೆ, ಶೇಕಡ 45 ರಷ್ಟು ಕೊಡುಗೆ ನೀಡುತ್ತಿದೆ. ಈ ವಲಯ ದೇಶದ ಆರ್ಥಿಕತೆಯಲ್ಲಿ ಪ್ರಮುಖ ಪಾಲುದಾರವಾಗಿದೆ. ಕೇಂದ್ರ ಸರ್ಕಾರವು ಅಸಂಘಟಿತ ವಲಯದಲ್ಲಿ ದುಡಿಯುವವರ ಸಬಲೀಕರಣದ ಹೊಣೆ ಹೊತ್ತಿದೆ. ಪಿ.ಎಂ ಸ್ಟ್ರೀಟ್ ವೆಂಡರ್ಸ್ ಆತ್ಮ ನಿರ್ಭರ ನಿಧಿ–ಪಿ.ಎಂ ಸ್ವನಿಧಿ ಯೋಜನೆ ಮೂಲಕ, ಬಂಡವಾಳ ಹೂಡಿಕೆಗೆ ಸಾಲ ಸೌಲಭ್ಯವನ್ನು ನೀಡಲಾಗುತ್ತಿದೆ. 2030 ರ ವರೆಗೆ ಜಾರಿಯಲ್ಲಿರುವ, ಪಿ.ಎಂ– ಸ್ವನಿಧಿ ಯೋಜನೆ ಅನುಷ್ಠಾನದ ಸಂದರ್ಭ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದ್ದು ಹೀಗೆ .

<><><>

ಧ್ವನಿ: ಪಿ.ಎಂ ನರೇಂದ್ರ ಮೋದಿ 17 ಸೆಕೆಂದುಗಳು

<><><>

'ಜನರಿಗಾಗಿ ಮತ್ತು ಭೂ ಗ್ರಹಕ್ಕಾಗಿ ಆಯುರ್ವೇದ', ಧ್ಯೇಯದೊಂದಿಗೆ, ಇಂದು 10 ನೇ ರಾಷ್ಟ್ರೀಯ ಆಯುರ್ವೇದ ದಿನವನ್ನು ಆಚರಿಸಲಾಗುತ್ತಿದೆ. ಕೇಂದ್ರ ಆಯುಷ್ ಇಲಾಖೆ, ಈ ವರ್ಷದಿಂದ ಜಾರಿಗೆ ಬರುವಂತೆ, ಸೆಪ್ಟೆಂಬರ್ 23 ರ, ನಿರ್ದಿಷ್ಟ ದಿನದಂದು ಆಯುರ್ವೇದ ದಿನಾಚರಣೆಯನ್ನು ಆಚರಿಸಲು ನಿರ್ಧರಿಸಿದೆ. ಆಯುರ್ವೇದ ದಿನಾಚರಣೆಯ ವಿಶೇಷತೆ ಹಾಗೂ ಮಹತ್ವದ ಬಗ್ಗೆ ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ಯಾದಗಿರಿ ಜಿಲ್ಲೆ, ಸುರಪುರದ ಡಾಕ್ಟರ ಮಹಾಲಕ್ಷ್ಮೀ ಬೀಳಗಿ

<><><>

ಧ್ವನಿ: ಮಹಾಲಕ್ಷ್ಮೀ ಬೀಳಗಿ 41 ಸೆಕೆಂದುಗಳು

<><><>

ಧಾರವಾಡದ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಭಾಭವನದಲ್ಲಿ, ಇಂದು ಬೆಳಗ್ಗೆ 10 ಗಂಟೆಗೆ, ಜಿಲ್ಲಾ ಆಯುಷ್ ಇಲಾಖೆ, ರಾಷ್ಟ್ರೀಯ ಆಯುಷ್ ಅಭಿಯಾನದಡಿ, ರಾಷ್ಟ್ರೀಯ ಆಯುರ್ವೇದ ದಿನಾಚರಣೆ ಹಾಗೂ ಉಚಿತ ಆರೋಗ್ಯ ಶಿಬಿರ ಆಯೋಜಿಸಲಾಗಿದೆ. ಆಯುರ್ವೇದ ದಿನಾಚರಣೆ ಅಂಗವಾಗಿ ಕಲಬುರಗಿ ಜಿಲ್ಲೆಯಲ್ಲಿ ಆಯೋಜಿತ ಜಾಗೃತಿ ಜಾಥಾಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭಂವರ್ ಸಿಂಗ್ ಮೀನಾ ಚಾಲನೆ ನೀಡಿದರು.

<><><>

ಹಿರಿಯ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ ಕಲಾವಿದರಾದ, ಪಂಡಿತ ಎಂ.ವೆಂಕಟೇಶ ಕುಮಾರ ಅವರಿಗೆ, ಮೈಸೂರು ದಸರಾ ಮಹೋತ್ಸವದ ಸಾಂಸ್ಕೃತಿಕ ಕಾರ್ಯಕ್ರಮದ ಉದ್ಘಾಟನಾ ಸಮಾರಂಭದಲ್ಲಿ, 'ರಾಜ್ಯ ಸಂಗೀತ ವಿದ್ವಾನ್' ಪ್ರಶಸ್ತಿ ಪ್ರದಾನಿಸಿ ಗೌರವಿಸಲಾಯಿತು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ನೀಡಲಾದ ಪ್ರಶಸ್ತಿ ಸ್ವೀಕರಿಸಿ, ಮಾತನಾಡಿದ ಅವರು, ಗದಗದ ಪುಟ್ಟರಾಜ ಕವಿ ಗವಾಯಿಯವರ, ಆಶೀರ್ವಾದದಿಂದ ಈ ಪ್ರಶಸ್ತಿ ಲಭಿಸಿದೆ ಎಂದರು.

<><><>

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:

ರಾಜ್ಯದಲ್ಲಿ ನವೋದ್ಯಮ ಹಾಗೂ ಸ್ಥಳೀಯ ಆರ್ಥಿಕತೆ ವೇಗ ವರ್ಧನೆಗೆ, 'ಲೀಪ್' ಕಾರ್ಯಕ್ರಮ

ಹಬ್ಬದ ಋತುವಿನಲ್ಲಿ 'ಜಿ.ಎಸ್.ಟಿ ಉಳಿತಾಯ ಉತ್ಸವ' ಆಚರಿಸುವಂತೆ ಪ್ರಧಾನಮಂತ್ರಿ ನರೇಂದ್ರ ಮೋದಿ ಕರೆ

ರಾಜ್ಯ ಸರ್ಕಾರದಿಂದ, 60 ಕ್ರೀಡಾಪಟುಗಳ ಒಲಿಂಪಿಕ್ಸ್ ತರಬೇತಿಗೆ, ತಲಾ 10 ಲಕ್ಷ ರೂಪಾಯಿ ಸಹಾಯಧನ

ಇಂದು ರಾಷ್ಟ್ರೀಯ ಆಯುರ್ವೇದ ದಿನ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಈ ಬೆಳಗ್ಗೆ 7 ಗಂಟೆ 35 ನಿಮಿಷಕ್ಕೆ

<><><>